ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ ನಡವಳಿಗಳು

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಯೋನಿವೃತ್ತಿ/ನಿಧನ ಹೊಂದಿರುವ ದಿನಗೂಲಿ ನೌಕರರಿಗೆ ಉಪಧನವನ್ನು ಬಿಡುಗಡೆ ಮಾಡುವ ಕುರಿತು

ಉಲ್ಲೇಖ: 1.ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ:77 ಶಾಸನ 2012, ಬೆಂಗಳೂರು, ದಿನಾಂಕ:15.02.2012.

2.ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ:146:ಸೇಸ್ಥ:2015, ಬೆಂಗಳೂರು, ದಿನಾಂಕ:16.05.2019

3.ಸರ್ಕಾರದ ಆದೇಶ ಸಂಖ್ಯೆ:ಇಡಿ:65;ಹೆಚ್‌ಪಿಸಿ:2021,ದಿನಾಂಕ:31.08.2021.

4.ಈ ಕಛೇರಿಯ ಕಛೇರಿ ಟಿಪ್ಪಣಿ ಸಂಖ್ಯೆ:ಕಾಶಿಇ:256:ದಿಗೂನೌ:ಸಿಆರ್2: 2021-22, ದಿನಾಂಕ:02.08.2021.

****

**ಪ್ರಸ್ತಾವನೆ:**

ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ದಿನಾಂಕ:10.04.2006ರಂದು 10 ವರ್ಷಗಳಗಿಂತ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿರುವ ದಿನಗೂಲಿ ನೌಕರರನ್ನು ಅವರು 60 ವರ್ಷಗಳ ವಯಸ್ಸು ಪೂರ್ಣವಾಗುವವರೆಗೂ ದಿನಗೂಲಿ ಆಧಾರದ ಮೇಲೆ ಮುಂದುವರಿಸಲು ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಹಾಗೂ ಉಲ್ಲೇಖ(2)ರ ಆದೇಶದನ್ವಯ ಪ್ರತಿಯೊಬ್ಬ ಅರ್ಹ ದಿನಗೂಲಿ ನೌಕರನಿಗೆ ಉಪಧನ ಪಾವತಿ ಕಾಯ್ದೆ 1972 (1972ರ ಕೇಂದ್ರ ಅಧಿನಿಯಮ ಸಂಖ್ಯೆ 39)ಸೆಕ್ಷನ್ 4ರಡಿಯಲ್ಲಿ ಅನುಮತಿಸಲ್ಪಟ್ಟಿರುವ ಮೊತ್ತವನ್ನು ಉಪಧನವೆಂದು ಪಾವತಿಸತಕ್ಕದ್ದು. ಹಾಗೂ ಅಧಿನಿಯಮದಡಿ ಅಧಿಸೂಚಿಸಲ್ಪಟ್ಟ ದಿನಗೂಲಿ ನೌಕರನು ದಿನಗೂಲಿ ಆಧಾರದಲ್ಲಿ ಸಲ್ಲಿಸಿದ ಸಂಪೂರ್ಣ ಸೇವಾವಧಿಯನ್ನು ಉಪಧನ ಪಾವತಿಗಾಗಿ ಪರಿಗಣಿಸತಕ್ಕದ್ದು, ಎಂಬ ಸರ್ಕಾರದ ಅಧಿಸೂಚನೆಯನ್ವಯ ಉಲ್ಲೇಖ(3)ರ ಸರ್ಕಾರದ ಆದೇಶದಲ್ಲಿ 2021-22ನೇ ಸಾಲಿನ ಆಯವ್ಯಯದಲ್ಲಿ ಹಂಚಿಕೆ ಮಾಡಿರುವ ಅನುದಾನದಲ್ಲಿ ದಿನಗೂಲಿ ಆಧಾರದ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ವೇತನ ಪಾವತಿಗೆ ಅನುದಾನವನ್ನು ಬಿಡುಗಡೆ ಮಾಡಲು ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳಿಗೆ ಆರ್ಥಿಕ ಪ್ರತ್ಯಾಯೋಜನೆಯನ್ನು ನೀಡಿ ಆದೇಶ ಹೊರಡಿಸಲಾಗಿರುತ್ತದೆ.

ಸರ್ಕಾರದ ಆದೇಶದನ್ವಯ ವಿವಿಧ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿನಗೂಲಿ ಸಿಬ್ಬಂದಿಗಳಾಗಿ ಕರ್ತವ್ಯ ನಿರ್ವಹಿಸುತ್ತಿದ್ದ 34 ದಿನಗೂಲಿ ನೌಕರರುಗಳಲ್ಲಿ ಉಲ್ಲೇಖ(4)ರಲ್ಲಿ ತಿಳಿಸಿರುವಂತೆ ಪ್ರಸ್ತುತ 01 ಖಾಯಂ ದಿನಗೂಲಿ ಸಿಬ್ಬಂದಿ ವಯೋನಿವೃತ್ತಿ ಹೊಂದಿರುವ ದಿನಗೂಲಿ ನೌಕರನಿಗೆ ಉಪಧನವನ್ನು ಬಿಡುಗಡೆ ಮಾಡಲು ಆದೇಶಿಸಲಾಗಿರುತ್ತದೆ. ಪ್ರಸ್ತುತ ಇಲಾಖಾ ವ್ಯಾಪ್ತಿಯಡಿಯಲ್ಲಿ ಬರುವ, ಸರ್ಕಾರಿ ಕಲಾ ಕಾಲೇಜು, ಬೆಂಗಳೂರು, ಇಲ್ಲಿ ಖಾಯಂ ದಿನಗೂಲಿ ನೌಕರನಾಗಿ ಕರ್ತವ್ಯ ನಿರ್ವಹಿಸಿ, ಪ್ರಸ್ತುತ ವಯೋನಿವೃತ್ತಿ ಹೊಂದಿರುವ ಶ್ರೀ ಶಿವರಾಮಯ್ಯ, ಇವರಿಗೆ ನಿಯಮಾನುಸಾರ ಉಪಧನವನ್ನು ಪಾವತಿಸಲು ಅನುದಾನ ಬಿಡುಗಡೆ ಮಾಡಬೇಕಾಗಿರುತ್ತದೆ. 2021-22ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ:2202-03-103-2-01-033ರಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಸದರಿ ಸಿಬ್ಬಂದಿಗೆ ರೂ.3,50,000/-(ಮೂರು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ)ಅನುದಾನವನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರಿಗೆ ಬಿಡುಗಡೆ ಮಾಡಲು ಈ ಆದೇಶ;

**ಆದೇಶ ಸಂಖ್ಯೆ:ಕಾಶಿಇ/ಆಯವ್ಯಯ/ದಿ.ನೌ.ವೇ/11/2021-22, ಬೆಂಗಳೂರು, ದಿನಾಂಕ:22.09.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಇಲಾಖಾ ವ್ಯಾಪ್ತಿಯಡಿಯಲ್ಲಿ ಬರುವ ಸರ್ಕಾರಿ ಕಲಾ ಕಾಲೇಜು, ಬೆಂಗಳೂರು, ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ದಿನಗೂಲಿ ನೌಕರನ ಸೇವೆಯನ್ನು 60 ವರ್ಷಗಳ ವಯಸ್ಸು ಪೂರ್ಣವಾಗುವವರೆಗೆ ದಿನಗೂಲಿ ನೌಕರರಾಗಿ ಮುಂದುವರೆಸಿ ಉಲ್ಲೇಖ(1) ಮತ್ತು (2)ರಲ್ಲಿ ಆದೇಶಿಸಿರುವ

--2

Scanned with CamScanner

ಹಿನ್ನಲೆಯಲ್ಲಿ, ಸದರಿ ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸಿದ ಖಾಯಂ ದಿನಗೂಲಿ ನೌಕರನಿಗೆ ಬಿಡುಗಡೆ ಮಾಡಬೇಕಾಗಿರುವ ಉಪಧನದ ವಿವರ ಈ ಕೆಳಕಂಡಂತಿದೆ.

| ಕ್ರ.ಸಂ | ಸಿಬ್ಬಂದಿಯ ಹೆಸರು | ಕಾಲೇಜಿನ ಹೆಸರು | ಬಿಡುಗಡೆ ಮಾಡಬೇಕಾದ ಉಪಧನದ ಮೊತ್ತ |
|---|---|---|---|
| 01 | ಶ್ರೀ ಶಿವರಾಮಯ್ಯ | ಸರ್ಕಾರಿ ಕಲಾ ಕಾಲೇಜು, ಬೆಂಗಳೂರು | ರೂ.3,50,000/- |

ಹೆಸರಿನ ಮುಂದೆ ನಮೂದಿಸಿರುವ ಮೊತ್ತ ಪಾವತಿಸಲು **ರೂ.3,50,000/-**(ಮೂರು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) **ಅನ್ನು** ಪಾವತಿಸುವ ಸಂಬಂಧ,2021-22ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ:2202-03-103-2-01-033ರಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಕಾಲೇಜಿನ ಸಂಬಂಧಪಟ್ಟ ಪ್ರಾಂಶುಪಾಲರಿಗೆ ಅನುದಾನ ಬಿಡುಗಡೆ ಮಾಡಲು ಅನುಮತಿ ನೀಡಿ ಆದೇಶಿಸಲಾಗಿದೆ.

**(ಮಾನ್ಯ ಆಯುಕ್ತರಿಂದ ಇ-ಆಫೀಸ್‌ನಲ್ಲಿ ಟಿಪ್ಪಣಿ ಅನುಮೋದಿಸಲ್ಪಟ್ಟಿದೆ)**

**ಕಾಲೇಜು ಶಿಕ್ಷಣ ನಿರ್ದೇಶಕರು**

**ಷರತ್ತುಗಳು :**

1. ಬಿಡುಗಡೆಗೊಳಿಸಿರುವ ಅನುದಾನವನ್ನು ನಿಯಮಾನುಸಾರ ಪರಿಶೀಲಿಸಿ ಬಿಡುಗಡೆಗೊಳಿಸಿರುವ ಉದ್ದೇಶಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ನಿಯಮಗಳನ್ನು ಪಾಲಿಸಿ ಅದರನ್ವಯವೇ ಪಾವತಿಸುವುದು.
2. ಸದರಿ ಅನುದಾನವನ್ನು ಕೆ-2 ತಂತ್ರಾಂಶದಲ್ಲಿ ಕ್ಲೇಮ್ ಮಾಡತಕ್ಕದ್ದು.
3. ಅನುದಾನ ಬಳಕೆಯಾದ ನಂತರ ಕಡ್ಡಾಯವಾಗಿ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು

**ಇವರಿಗೆ:**

ಪ್ರಾಂಶುಪಾಲರು, ಸರ್ಕಾರಿ ಕಲಾ ಕಾಲೇಜು, ಬೆಂಗಳೂರು.- ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1.ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಅಂತರ್ಜಾಲದಲ್ಲಿ ಅಳವಡಿಸಲು ಕೋರಿದೆ.

2.ಕಛೇರಿ ಪ್ರತಿ.

Scanned with CamScanner